ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು

**ಸಂಖ್ಯೆ :** ಇಡಿ/ಕೆಇಎ/ಆಡಳಿತ/ಸಿ.ಆರ್.-09/ 2015-16 **ದಿನಾಂಕ:** 17-12-2016

**ಅಧಿಸೂಚನೆ- 1**

**ಎನ್.ಸಿ.ಸಿ. ನಿರ್ದೇಶನಾಲಯ (ರಾಜ್ಯಕೋಶ) ಬೆಂಗಳೂರು ಮತ್ತು ರಾಜ್ಯದ ವ್ಯಾಪ್ತಿಯಲ್ಲಿ ಖಾಲಿ ಇರುವ ಲಸ್ಕರ್ (ಗ್ರೂಪ್ 'ಡಿ') ಹುದ್ದೆಗಳ ನೇರ ನೇಮಕಾತಿ**

ಸರ್ಕಾರದ ಪತ್ರ ಸಂಖ್ಯೆ ಇಡಿ 36 ರಾಯಿಸೇ 2014, ದಿನಾಂಕ 24-06-2015 ರ ಅನ್ವಯ ಎನ್.ಸಿ.ಸಿ. ನಿರ್ದೇಶನಾಲಯ (ರಾಜ್ಯಕೋಶ) ಇವರು ತಮ್ಮ ಪತ್ರ ಸಂಖ್ಯೆ: ಎಸ್.1.ಎನ್.ಸಿ.ಇ./140/ನೇಮಕಾತಿ 14-15 ದಿನಾಂಕ 25-10-2016, 08-11-2016, 16-11-2016, 05-12-2016 ರಲ್ಲಿ ಖಾಲಿ ಇರುವ ಲಸ್ಕರ್ (ಗ್ರೂಪ್ 'ಡಿ') ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಕೋರಿರುತ್ತಾರೆ. Karnataka Directorate of National Cadet Corps (Cadre and Recruitment) Rules 2003 ಅನ್ವಯ ಲಸ್ಕರ್ (ಗ್ರೂಪ್ 'ಡಿ') ಹುದ್ದೆಗಳನ್ನು ನೇರ ನೇಮಕಾತಿ ಮಾಡುವ ಸಂಬಂಧ ಎಸ್.ಎಸ್.ಎಲ್.ಸಿ / 10ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಕನ್ನಡ ವಿಷಯವನ್ನು ಒಂದು ಭಾಷೆಯನ್ನಾಗಿ ಅಭ್ಯಸಿಸಿರುವ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹತಾ ಪರೀಕ್ಷೆಯಲ್ಲಿ ಅಂದರೆ, ಎಸ್.ಎಸ್.ಎಲ್.ಸಿ / 10ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಅರ್ಹ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ನೇಮಕಾತಿ ಮಾಡಲಾಗುವುದು. (ಸ್ಪರ್ಧಾತ್ಮಕ ಪರೀಕ್ಷೆ ಇರುವುದಿಲ್ಲ)

**ವೇತನ ಶ್ರೇಣಿ :** 9600-14,550

**ಒಟ್ಟು ಹುದ್ದೆಗಳು:** 82 - ಪ್ರವರ್ಗವಾರು ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ನೀಡಲಾಗಿದೆ.

**ಸಂಖ್ಯೆ :** ಇಡಿ/ಕೆಇಎ/ಆಡಳಿತ/ಸಿ.ಆರ್.-09/(ಹೆಚ್.ಕೆ.)/2015-16 **ದಿನಾಂಕ:** 17-12-2016

**ಅಧಿಸೂಚನೆ-2**

**ಎನ್.ಸಿ.ಸಿ. ನಿರ್ದೇಶನಾಲಯ (ರಾಜ್ಯಕೋಶ) ಬೆಂಗಳೂರು ಮತ್ತು ರಾಜ್ಯದ ವ್ಯಾಪ್ತಿಯಲ್ಲಿ ಖಾಲಿ ಇರುವ ಲಸ್ಕರ್ (ಗ್ರೂಪ್ 'ಡಿ') ಹುದ್ದೆಗಳ ನೇರ ನೇಮಕಾತಿ (ಹೈದರಾಬಾದ್ ಕರ್ನಾಟಕ ಪ್ರದೇಶದ ಹುದ್ದೆಗಳಿಗೆ - ಸ್ಥಳೀಯ ವೃಂದ)**

ಸರ್ಕಾರದ ಪತ್ರ ಸಂಖ್ಯೆ ಇಡಿ 36 ರಾಯಿಸೇ 2014, ದಿನಾಂಕ 24-06-2015 ರ ಅನ್ವಯ ಎನ್.ಸಿ.ಸಿ. ನಿರ್ದೇಶನಾಲಯ (ರಾಜ್ಯಕೋಶ) ಇವರು ತಮ್ಮ ಪತ್ರ ಸಂಖ್ಯೆ: ಎಸ್.1.ಎನ್.ಸಿ.ಇ./140/ನೇಮಕಾತಿ 14-15 ದಿನಾಂಕ 25-10-2016, 08-11-2016, 16-11-2016, 05-12-2016 ರಲ್ಲಿ ಖಾಲಿ ಇರುವ ಲಸ್ಕರ್ (ಗ್ರೂಪ್ 'ಡಿ') ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಕೋರಿರುತ್ತಾರೆ. Karnataka Directorate of National Cadet Corps (Cadre and Recruitment) Rules 2003 ಅನ್ವಯ ಲಸ್ಕರ್ (ಗ್ರೂಪ್ 'ಡಿ') ಹುದ್ದೆಗಳನ್ನು ನೇರ ನೇಮಕಾತಿ ಮಾಡುವ ಸಂಬಂಧ ಎಸ್.ಎಸ್.ಎಲ್.ಸಿ / 10ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಕನ್ನಡ ವಿಷಯವನ್ನು ಒಂದು ಭಾಷೆಯನ್ನಾಗಿ ಅಭ್ಯಸಿಸಿರುವ ಅರ್ಹ **ಹೈದರಾಬಾದ್ ಕರ್ನಾಟಕ ಪ್ರದೇಶದ** ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹತಾ ಪರೀಕ್ಷೆಯಲ್ಲಿ ಅಂದರೆ, ಎಸ್.ಎಸ್.ಎಲ್.ಸಿ / 10ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ ಅರ್ಹ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ನೇಮಕಾತಿ ಮಾಡಲಾಗುವುದು. (ಸ್ಪರ್ಧಾತ್ಮಕ ಪರೀಕ್ಷೆ ಇರುವುದಿಲ್ಲ)

**ವೇತನ ಶ್ರೇಣಿ :** 9600-14,550

**ಒಟ್ಟು ಹುದ್ದೆಗಳು:** 02 - ಪ್ರವರ್ಗವಾರು ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ನೀಡಲಾಗಿದೆ.

In case of any discrepancy / ambiguity arise with regard to any of the above prescribed rules / procedures, Karnataka Civil Services (General Recruitment) Rules, 1977 as amended from time to time, shall prevail.

## ಎರಡೂ ಅಧಿಸೂಚನೆಗಳಿಗೆ ಸಾಮಾನ್ಯ ಸೂಚನೆಗಳು

### 1. ಅರ್ಜಿ ಸಲ್ಲಿಸುವ ವಿವರ ಮತ್ತು ವಿಧಾನ

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿಸಲ್ಲಿಸಲು ಪ್ರಾರಂಭಿಕ ದಿನಾಂಕ | 20-12-2016 ರ ಸಂ. 5.30 ರಿಂದ |
| ಆನ್‌ಲೈನ್ ಮುಖಾಂತರ ಅರ್ಜಿಸಲ್ಲಿಸಲು ಕೊನೆಯ ದಿನಾಂಕ | 19-01-2017 ರ ಸಂ. 5.30ರ ವರೆಗೆ |
| ಬ್ಯಾಂಕ್ ವೇಳೆಯಲ್ಲಿ ಶುಲ್ಕ ಪಾವತಿ ಮಾಡಲು ಕೊನೆಯ ದಿನಾಂಕ | 21-01-2017 |

ಅರ್ಜಿಗಳನ್ನು ONLINE ಮೂಲಕ ಭರ್ತಿ ಮಾಡಿ ಪರೀಕ್ಷಾ ಶುಲ್ಕವನ್ನು **ಬ್ಯಾಂಕ್** ಕೆಲಸದ ವೇಳೆಯೊಳಗೆ ಕರ್ನಾಟಕ ರಾಜ್ಯದ SBM ಬ್ಯಾಂಕ್ ಯಾವುದೇ ಶಾಖೆಗಳಲ್ಲಿ ಮಾತ್ರ ಸಂದಾಯ ಮಾಡಬಹುದಾಗಿರುತ್ತದೆ. ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್, ಇತ್ಯಾದಿ ಮುಖಾಂತರ ಸ್ವೀಕರಿಸಲಾಗುವುದಿಲ್ಲ. ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು.**

ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಅಧಿಸೂಚನೆ 1ಕ್ಕೆ **Recruitment of Group-D ಲಿಂಕ್** ಅನ್ನು ಆಯ್ಕೆ ಮಾಡಿ **ಹಾಗು** ಅಧಿಸೂಚನೆ 2ಕ್ಕೆ **Recruitment of Group-D-HK ಲಿಂಕ್** ಅನ್ನು ಆಯ್ಕೆ ಮಾಡಿ ಆನ್ ಲೈನ್ ಮುಖಾಂತರ ಅರ್ಜಿಯನ್ನು ಭರ್ತಿಮಾಡಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ. ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡಲು ವಿವರವಾದ ಮಾಹಿತಿಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನೀಡಲಾಗಿದೆ.

ಸೂಚನೆ: ಅಧಿಸೂಚನೆ -1 ಮತ್ತು ಅಧಿಸೂಚನೆ -2 ರಲ್ಲಿಯ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸಬೇಕು.

**2. ವಿಶೇಷ ಸೂಚನೆ:** Online ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (**Help line) 080 - 23 460 460** ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

ಅರ್ಜಿಗಳನ್ನು ಆನ್-ಲೈನ್ **(Online)** (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

### 3. ಶುಲ್ಕ

| ವಿವರಗಳು | ಶುಲ್ಕ |
|---|---|
| ಸಾಮಾನ್ಯ ಅರ್ಹತೆ | ರೂ. 300/- |
| ಇತರೆ ಪ್ರವರ್ಗಗಳು (2ಎ, 2ಬಿ, 3ಎ, 3ಬಿ) ಅಭ್ಯರ್ಥಿಗಳು | ರೂ. 150/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳು | ರೂ. 100/- |
| ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ. (ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು) | |

**ಸೂಚನೆ:** ಅಧಿಸೂಚನೆ -1 ಮತ್ತು ಅಧಿಸೂಚನೆ -2 ರಲ್ಲಿಯ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಎರಡೂ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸಬೇಕು ಮತ್ತು ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸಬೇಕು.

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಪ್ರಾಧಿಕಾರವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

### 4. ಅರ್ಹತಾ ಷರತ್ತುಗಳು:

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**5. ಪಿಂಚಣಿ ಸೌಲಭ್ಯ:–**

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31–3–2006 ರಂತೆ.

**6. ಶೈಕ್ಷಣಿಕ ಅರ್ಹತೆ:**

(ಅ) ಅಭ್ಯರ್ಥಿಯು ಎಸ್.ಎಸ್.ಎಲ್.ಸಿ / 10ನೇ ತರಗತಿ / ತತ್ಸಮಾನ ಪರೀಕ್ಷೆಯಲ್ಲಿ **ಕನ್ನಡವನ್ನು** ಒಂದು ಭಾಷೆಯನ್ನಾಗಿ ತೆಗೆದುಕೊಂಡು ಉತ್ತೀರ್ಣರಾಗಿರಬೇಕು ಮತ್ತು

(ಆ) ಅಭ್ಯರ್ಥಿಗಳು ಕರ್ನಾಟಕ ಗೃಹ ರಕ್ಷಕ ದಳ ಅಧಿನಿಯಮ 1962ರ ಅಡಿಯಲ್ಲಿ ಗೃಹ ರಕ್ಷಕ ಪಡೆಯ ಸದಸ್ಯನಾಗಿ ಸೇವೆ ಸಲ್ಲಿಸಲೂ ಕೂಡ ಸಿದ್ಧರಿರಬೇಕು.

**ವೇತನ ಶ್ರೇಣಿ:** 9600–14,550

**ಒಟ್ಟು ಹುದ್ದೆಗಳು:** 84 ಪ್ರವರ್ಗವಾರು ವಿವರಗಳನ್ನು ಈ ಕೆಳಗೆ ನೀಡಲಾಗಿದೆ.

ಉಳಿದ ಮೂಲ ವೃಂದದಲ್ಲಿ ಮೀಸಲಿಡಲಾದ ಲಸ್ಕರ್ ಹುದ್ದೆಗಳ ವರ್ಗೀಕರಣ:– (Non-Hyderabad Karnataka Posts)

| | ಇತರೆ | ಮಹಿಳಾ | ಗ್ರಾಮೀಣ | ಮಾ.ಸೈ. | ಅಂ.ವಿ. | ಯೋ.ಅ | ಕ.ಮಾ.ಅ. | ಒಟ್ಟು |
|---|---|---|---|---|---|---|---|---|
| ಅ) ಪ.ಜಾ | 02 | 05 | 04 | 01 | 01* | – | – | 13 |
| ಆ) ಪ.ಪಂ | 01 | 01 | 01 | – | – | – | – | 03 |
| ಇ) ಪ್ರ –1 | 01 | 01 | 01 | – | 01* | – | – | 04 |
| ಈ)ಪ್ರ –2 (ಎ) | 02 | 05 | 03 | 01 | 01* | – | – | 12 |
| ಉ) ಪ್ರ –2(ಬಿ) | 01 | 01 | 01 | – | – | – | – | 03 |
| ಊ)ಪ್ರ– 3(ಎ) | 01 | 01 | 01 | – | – | – | – | 03 |
| ಋ) ಪ್ರ –3(ಬಿ) | 01 | 01 | 01 | – | – | – | – | 03 |
| ಎ) ಸಾ.ಅ. | 08 | 13 | 10 | 04 | 02* | 02 | 02 | 41 |
| ಒಟ್ಟು | 17 | 28 | 22 | 06 | 05* | 02 | 02 | **82** |

*****– ದೃಷ್ಟಿ ಮಾಂದ್ಯ (Low Vision) ಹೊಂದಿದವರಿಗೆ ಮಾತ್ರ.

ಸ್ಥಳೀಯ ವೃಂದದಲ್ಲಿ ಮೀಸಲಿಡಲಾದ 02 ಲಸ್ಕರ್ ಹುದ್ದೆಗಳ ವರ್ಗೀಕರಣ: (Hyderabad Karnataka Posts)

| | ಇತರೆ | ಮಹಿಳಾ | ಗ್ರಾಮೀಣ | ಮಾ.ಸೈ. | ಅಂ.ವಿ. | ಯೋ.ಅ | ಕ.ಮಾ.ಅ. | ಒಟ್ಟು |
|---|---|---|---|---|---|---|---|---|
| ಅ) ಪ.ಜಾ | 01 | – | – | – | – | – | – | 01 |
| ಆ) ಪ.ಪಂ | – | – | – | – | – | – | – | – |
| ಇ) ಪ್ರ –1 | – | – | – | – | – | – | – | – |
| ಈ) ಪ್ರ –2 (ಎ) | – | – | – | – | – | – | – | – |
| ಉ) ಪ್ರ –2(ಬಿ) | – | – | – | – | – | – | – | – |
| ಊ)ಪ್ರ – 3(ಎ) | – | – | – | – | – | – | – | – |
| ಋ) ಪ್ರ –3(ಬಿ) | – | – | – | – | – | – | – | – |
| ಎ) ಸಾ.ಅ. | 01 | – | – | – | – | – | – | 01 |
| ಒಟ್ಟು | 02 | – | – | – | – | – | – | **02** |

7. **ವಯೋಮಿತಿ:** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ತುಂಬಿರತಕ್ಕದ್ದು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| | | |
|---|---|---|
| 1) ಸಾಮಾನ್ಯ ಅಭ್ಯರ್ಥಿಗಳು | – | 35 ವರ್ಷಗಳು |
| 2) ಪ್ರವರ್ಗ–2ಎ / 2ಬಿ / 3ಎ / 3ಬಿ ಅಭ್ಯರ್ಥಿಗಳು | – | 38 ವರ್ಷಗಳು |
| 3) ಪರಿಶಿಷ್ಟಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ–1 ಅಭ್ಯರ್ಥಿಗಳು | – | 40 ವರ್ಷಗಳು |

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಮಾಜಿ ಸೈನಿಕರು, ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು, ಎನ್.ಸಿ.ಸಿ ಪರಿವೀಕ್ಷಕರು, ಗ್ರಾಮ ಸಮೂಹ ಪರಿಶೀಲಕರು, ಜೀತ ಕಾರ್ಮಿಕರು, ಜನಗಣತಿ, ವಿಧವೆ ಮತ್ತು ವಿಕಲಚೇತನ ಅಭ್ಯರ್ಥಿಗಳಿಗೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ಅಧಿನಿಯಮ (3) ರ ನಿಯಮ 6 ರಲ್ಲಿ ನಿಗದಿಪಡಿಸಿರುವಂತೆ ನಿಗದಿತ ಗರಿಷ್ಠ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**ಈ ಮುಂದಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು**

**i.** ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ **ಅವಧಿ** ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

**ii.** ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**ವಿವರಣೆ:** (ಎ) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ, ಅಂದರೆ ಡಿಫೆನ್ಸ್ ಸೆಕ್ಯೂರಿಟಿಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು (ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. ಮತ್ತು

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಸೇವೆಯಲ್ಲಿ ಬಿಡುಗಡೆಯಾದವನು

**ಅಥವಾ**

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

ಉ) ತನ್ನ ಸ್ವಂತ ಕೋರಿಕೆ ಮೆರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು;

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ಈ ಮೇಲ್ಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

**ವಿವರಣೆ:** ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ, ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

iii. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕೋರ್‌ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

iv. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ, ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

v. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

vi. ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

vii. ಅಭ್ಯರ್ಥಿಯು ಜೀತಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

viii. ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷಗಳು.

ಮೇಲ್ಕಂಡ ಎಲ್ಲಾ ವರ್ಗಗಳಲ್ಲಿ ವಯೋಮಿತಿ ರಿಯಾಯಿತಿ ಪಡೆಯಲಿಚ್ಚಿಸುವ ಅಭ್ಯರ್ಥಿಗಳು ಸೂಚನೆಯನ್ನು ಎಚ್ಚರಿಕೆಯಿಂದ ಓದಿ ರಿಯಾಯಿತಿಗೆ ಅರ್ಜಿ ಸಲ್ಲಿಸತಕ್ಕದ್ದು.

**8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:** ಜಾತಿ ಮೀಸಲಾತಿ ಕೋರಬಯಸುವ:

1. ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ
2. ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ
3. 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು, ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಅಂದರೆ, ಹಿಂದುಳಿದ ವರ್ಗಗಳ ಪ್ರ–2ಎ, ಪ್ರ–2ಬಿ, ಪ್ರ–3ಎ ಮತ್ತು ಪ್ರ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ 05 ವರ್ಷಗಳ ಅವಧಿಯಲ್ಲಿರಬೇಕು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧ–06 ರಲ್ಲಿ ನೀಡಿದೆ.

**9. ಗ್ರಾಮೀಣ ಅಭ್ಯರ್ಥಿ:**

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದಿರತಕ್ಕದ್ದು.
4. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

**ಸೂಚನೆ:** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ–2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

**10. ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು.

**11. ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ಸೆನೆನಿ 99, ದಿನಾಂಕ: 23–11–2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ(ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸತಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

**12. ಅಂಗವಿಕಲ ಅಭ್ಯರ್ಥಿ:–**

ಸರ್ಕಾರದ ಅಧಿಸೂಚನೆ ಸಂಖ್ಯೆ WCD/348/PH8/2015 ದಿನಾಂಕ 17–10–2016ರ ಅನ್ವಯ ಈ ಪ್ರಕಟಣೆಯ ಮೂಲಕ ತುಂಬಲಾಗುವ ಹುದ್ದೆಗಳಲ್ಲಿ Low Vision ಮತ್ತು Hearing impairment ಅಂಗವಿಕಲತೆ ಹೊಂದಿರುವವರು ಮಾತ್ರ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಈ ಅಂಗವಿಕಲತೆಯನ್ನು ಹೊಂದಿದವರನ್ನು ಹೊರತು ಪಡಿಸಿ ಇತರೆ ಅಂಗವಿಕಲತೆ ಹೊಂದಿದವರನ್ನು ನೇಮಕಾತಿಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಉಪನಿಯಮ 2(1) (ll) (ii) ರಲ್ಲಿ ನಿರ್ದಿಷ್ಟಪಡಿಸಿರುವ ಕ್ರಮ ಸಂಖ್ಯೆ (ii) ಮತ್ತು (iv) (Low Vision, Hearing Impairment) ವೈಕಲ್ಯತೆಯ ಶೇ.40ಕ್ಕೆ ಕಡಿಮೆಯಿಲ್ಲದಿರುವ ಅಂಗವಿಕಲ ವ್ಯಕ್ತಿಗಳು.

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ದಿನಾಂಕ: 19–11–2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯಿಂದ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ಸೇನೇನಿ 2006, ದಿನಾಂಕ:30–10–2007 ರಲ್ಲಿ ಅಂಧ/ದೃಷ್ಟಿ ಮಾಂದ್ಯ ಅಂಗವಿಕಲತೆಯ ಮೀಸಲಾತಿ ಕೋರಿದ್ದಲ್ಲಿ, ಆಯ್ಕೆ ಪ್ರಾಧಿಕಾರ ವೈದ್ಯಕೀಯ ಸಮಿತಿಯನ್ನು ರಚಿಸಿ, ವೈದ್ಯಕೀಯ ಪರೀಕ್ಷೆಯಲ್ಲಿ ಅಂತಹ ಅಭ್ಯರ್ಥಿಗಳ ಅಂಧ/ದೃಷ್ಟಿ ಮಾಂದ್ಯತೆಯನ್ನು ಪರೀಕ್ಷಿಸಿ ಖಚಿತಪಡಿಸಿಕೊಳ್ಳಬೇಕೆಂದು ನಿರ್ದಿಷ್ಟಪಡಿಸಿದ್ದು, ಅದರಂತೆ ಆಯ್ಕೆ ಪ್ರಾಧಿಕಾರವು ಪರೀಕ್ಷಾ ಪೂರ್ವ ಅಥವಾ ಪರೀಕ್ಷೋತ್ತರದ ನಂತರ ನಡೆಸುವ ವೈದ್ಯಕೀಯ ಪರೀಕ್ಷೆಯ ಅಂತಿಮ ವರದಿಗೆ ಅಂಧ/ದೃಷ್ಟಿಮಾಂದ್ಯ ಅಭ್ಯರ್ಥಿಗಳ ಮೀಸಲಾತಿಯು ಬದ್ಧವಾಗಿರುತ್ತದೆ.

## 13. ಅನುಚ್ಛೇಧ 371(ಜೆ) ರಂತೆ ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:–

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು **ಅನುಬಂಧ–'ಎ'** ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ **ಸಹಿ, ಮೊಹರು** ಮತ್ತು **ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.** ಈ ಪ್ರಮಾಣ ಪತ್ರದ ನಮೂನೆಯನ್ನು **ಅನುಬಂಧ – ಎ ರಡಿಯಲ್ಲಿ** ತೋರಿಸಲಾಗಿದೆ. **ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.**

**ಸೂಚನೆ:** ಎಲ್ಲಾ ಸಂಬಂಧಿಸಿದ ದಾಖಲೆಗಳು / ಅಂಕ ಪಟ್ಟಿಗಳು / ಮೀಸಲಾತಿಯ ಪ್ರಮಾಣಪತ್ರಗಳು ಹಾಗು ಇನ್ನಿತರ ಅವಶ್ಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಅಥವಾ ಅದಕ್ಕೂ ಮೊದಲಿನ ದಿನಾಂಕದೊಳಗೆ ಅಭ್ಯರ್ಥಿಗಳು ಕಡ್ಡಾಯವಾಗಿ ಪಡೆದಿರಬೇಕು / ಹೊಂದಿರಬೇಕು.

ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಪ್ರಮಾಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರ ಪರಿಶೀಲಿಸುವ ಸಂದರ್ಭದಲ್ಲಿ ತಪ್ಪದೆ ಹಾಜರುಪಡಿಸತಕ್ಕದ್ದು. ಇದಕ್ಕೆ ಹೆಚ್ಚಿನ ಕಾಲಾವಕಾಶ ನೀಡಲಾಗುವುದಿಲ್ಲ. ಅರ್ಹತೆ, ಮೀಸಲಾತಿ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.

## 14. ಆಯ್ಕೆ ವಿಧಾನ:

ಅಭ್ಯರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನುಸಾರ ಹುದ್ದೆಗಳಿಗೆ ಆಯ್ಕೆ ಮಾಡಲಾಗುವುದು. ಅರ್ಹತಾ ಪರೀಕ್ಷೆಯಲ್ಲಿ ಇಬ್ಬರು ಅಥವಾ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳನ್ನು ಪಡೆದಿದ್ದರೆ, ಅಂಕಗಳ ಅರ್ಹತಾ ಪಟ್ಟಿ ತಯಾರಿಸುವಾಗ ಅಂತಹ ಅಭ್ಯರ್ಥಿಗಳ ಅರ್ಹತೆಯನ್ನು ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು. ವಯಸ್ಸಿನಲ್ಲಿ ಹಿರಿಯರಾದವರನ್ನು ಅರ್ಹತಾ ಪಟ್ಟಿಯಲ್ಲಿ ಹಿರಿಯರೆಂದು ತೋರಿಸಲಾಗುವುದು.

**ಈ ಹುದ್ದೆಗಳ ನೇರ ನೇಮಕಾತಿಗಾಗಿ ಯಾವುದೇ ವಿಧವಾದ ಸಂದರ್ಶನ ಇರುವುದಿಲ್ಲ.**

## 15. ಪ್ರಮುಖ ಸೂಚನೆಗಳು:

ಅಭ್ಯರ್ಥಿಗಳು ಅನ್‌ಲೈನ್ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶವಿರುವುದಿಲ್ಲ. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ, ಆಯ್ಕೆ ಪ್ರಾಧಿಕಾರವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

1) ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ ಜನ್ಮ ದಿನಾಂಕ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದು ಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.
3) ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ /ಸ್ಥಳೀಯ ಪ್ರಾಧಿಕಾರ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣ ಪತ್ರವನ್ನು ಒದಗಿಸಬೇಕು ಇಲ್ಲದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**16. ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :**

1. ಈ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಾದ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರುವ ಪ್ರಮಾಣ ಪತ್ರಗಳು ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ) / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record)
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.

**17. ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :**

1. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ

**ಟಿಪ್ಪಣಿ:** ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಅ ಮೀಸಲಾತಿಗೆ ಅರ್ಹರೆ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

2. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ **ಡಿ/ಇ/ಎಫ್** ನಲ್ಲಿ ತಹಶೀಲ್ದಾರ್‌ರವರಿಂದ ಪಡೆದಿರುವ ಪ್ರಮಾಣ ಪತ್ರ.

3. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (‘No Objection’ Certificate) ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.

4. ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿಗೆ ಸಂಬಂಧಿಸಿದ ಅರ್ಹತಾ ಪ್ರಮಾಣಪತ್ರ.

5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ

6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ

7. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ.

8. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣಪತ್ರ.

ಈ ಮೇಲಿನ ಅರ್ಹತೆ, ಮೀಸಲಾತಿ ಇತ್ಯಾದಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರವೇ ಅಭ್ಯರ್ಥಿಗಳನ್ನು ಅಂಕಗಳ ಜೇಷ್ಠತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು.

**18. ಹೆಚ್ಚುವರಿ ಸೂಚನೆಗಳು:**

1. ಅಭ್ಯರ್ಥಿಗಳು ON-LINE ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಸಿದ್ದಪಡಿಸುವುದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. ಅಪೂರ್ಣವಾಗಿರುವ, ಫೋಟೋ, ಹೆಬ್ಬೆಟ್ಟು ಗುರುತು ಮತ್ತು ಸಹಿ ಗಳನ್ನು upload ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

**19. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–**

| | | | |
|---|---|---|---|
| ಸಾ.ಅ. | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ. | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ. | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | Cat – 1 | Category – I |
| 2ಎ | ಪ್ರವರ್ಗ–2ಎ | 2A | Category – 2A |
| 2ಬಿ | ಪ್ರವರ್ಗ–2ಬಿ | 2B | Category – 2B |
| 3ಎ | ಪ್ರವರ್ಗ–3ಎ | 3A | Category – 3A |
| 3ಬಿ | ಪ್ರವರ್ಗ–3ಬಿ | 3B | Category – 3B |
| ಮಾ.ಸೈ. | ಮಾಜಿ ಸೈನಿಕ | Ex- MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ. | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಯೋ.ಅ. | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಅಂ.ವಿ. | ಅಂಗವಿಕಲ | PH | Physically Handicapped Person |
| ಹೈ.ಕ. | ಹೈದರಾಬಾದ್–ಕರ್ನಾಟಕ | H.K. | Hyderabad-Karnataka |

**20. ಪತ್ರ ವ್ಯವಹಾರ:**

ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದಾಗ್ಯೂ ಅರ್ಜಿ ತುಂಬುವಾಗ / ಡೌನ್‌ಲೋಡ್ ಮಾಡಿಕೊಳ್ಳುವಲ್ಲಿ ಸಮಸ್ಯೆ ಉಂಟಾದಲ್ಲಿ, ಸಹಾಯವಾಣಿ **(Help line) No. 080–23 460 460** ಸಂಪರ್ಕಿಸತಕ್ಕದ್ದು. ಅಭ್ಯರ್ಥಿಯು ಮಾಹಿತಿಗಾಗಿ ಸಂಪರ್ಕಿಸುವ ಸಮಯದಲ್ಲಿ ಈ ಹುದ್ದೆಗಳಿಗೆ ಸಲ್ಲಿಸಿದ ಅರ್ಜಿಯ ಕ್ರಮಸಂಖ್ಯೆ, ಜನ್ಮ ದಿನಾಂಕ ಇತ್ಯಾದಿ ವಿವರಗಳನ್ನು ನೀಡತಕ್ಕದ್ದು.

**21. ದುರ್ನಡತೆ :**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಕಂಡುಬಂದಲ್ಲಿ ಹಾಗೂ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ನೇಮಕಾತಿಗೆ ಅನರ್ಹರಾಗುತ್ತಾರೆ.

**ಸೂಚನೆ:** ಕರ್ನಾಟಕ ರಾಜ್ಯ ನಾಗರೀಕ ಸೇವೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957, ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ನಡತೆ) ನಿಯಮ 1966 ಮತ್ತು ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪ್ರೊಬೇಷನ್) ನಿಯಮ 1977 ಮತ್ತು ಸರ್ಕಾರಿ ನೌಕರರ ಸೇವಾ ನಿಬಂಧನೆಗಳನ್ನು ನಿಯಂತ್ರಿಸಲು ಕರ್ನಾಟಕ ರಾಜ್ಯ ನಾಗರೀಕ ಸೇವೆಗಳ ನಿಯಮ, 1978 (1990ರ ಕರ್ನಾಟಕ ನಿಯಮ 14) ಮತ್ತು ಡಿಪಿಎಆರ್ 19 ಎಸ್‌ಸಿಆರ್ 2006, ದಿನಾಂಕ 14–08–2006 ರಲ್ಲಿ ಹೊರಡಿಸಿದ ಕರ್ನಾಟಕ ನಾಗರೀಕ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಆಯ್ಕೆ ಮುಖಾಂತರ ಮಾಡಲಾಗುವ ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು, 2006ರಲ್ಲಿ ಗ್ರೂಪ್ ಡಿ ಹುದ್ದೆಗಳ ನೇಮಕಾತಿ ಕುರಿತಂತೆ ವಿವರಿಸಿದ ರೀತಿಯಲ್ಲಿ ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಧರಿಸಿ ಹಾಗು ಕಾಲಕಾಲಕ್ಕೆ ಜಾರಿಗೆ ಬಂದಿರುವ ಬಳಕೆಯಲ್ಲಿರುವ ಎಲ್ಲಾ ಕಾಯಿದೆಗಳು ಅವು ನಿಯಮ ಆಶಯಕ್ಕೆ ಅನುಗುಣವಾಗಿಲ್ಲದಿದ್ದಲ್ಲಿ ಹೊರತುಪಡಿಸಿ ಆಯ್ಕೆಯನ್ನು ಮಾಡಲಾಗುವುದು.

ಸಹಿ/–
**ಕಾರ್ಯನಿರ್ವಾಹಕ ನಿರ್ದೇಶಕರು.**

**ಅನುಬಂಧ**

**(ಪ.ಜಾ/ಪ.ಪಂ.ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ–ಡಿ**

**(ನಿಯಮ 3ಎ (2)(3) ನ್ನು ನೋಡಿ)**

**ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ.**

**ಪ್ರಮಾಣ ಪತ್ರ**

____________________ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ________________ಜಿಲ್ಲೆಯ / ವಿಭಾಗದ ________________ಗ್ರಾಮ / ಪಟ್ಟಣ * ನಿವಾಸಿಯಾದ ಶ್ರೀ / ಶ್ರೀಮತಿ _________________ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ _________________ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950.
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951. (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ, ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956.
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976 ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962.
- ಸಂವಿಧಾನ (ಪಾಂಡಿಚೆರಿ) ಅನುಸೂಚಿತ ಜಾತಿಗಳ ಆದೇಶ, 1964.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ), 1967.
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ, 1988.
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ.

2. ಶ್ರೀ / ಶ್ರೀಮತಿ/ ಕುಮಾರಿ * __________________________ ಮತ್ತು / ಅಥವಾ ಅವನ */ಅವಳ* ಕುಟುಂಬವು ________ ರಾಜ್ಯ /ಕೇಂದ್ರಾಡಳಿತ ಪ್ರದೇಶದ __________________ ಜಿಲ್ಲಾ / ವಿಭಾಗದ * ______________________ ಗ್ರಾಮ / ಪಟ್ಟಂದ ಸಾಮಾನ್ಯ ನಿವಾಸಿ (ಗಳು).

ಸಹಿ:__________________________

ತಹಸೀಲ್ದಾರ್:____________________

ಸ್ಥಳ:

ಪದನಾಮ:

ದಿನಾಂಕ:

ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ ***
*** ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ / ಹೊಡೆದು ಹಾಕಿ.**

**ಸೂಚನ:** ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950 ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೆ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/78 ಎಸ್ ಸಿಟಿ–1 ಗೃಹಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್ ಟಿ((ಎಸ್ ಸಿಟಿ) ದಿನಾಂಕ 5ನೇ ಆಗಸ್ಟ್ 1975 ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

**(ನಿಯಮ 3ಎ (2) (3) ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

______________________ ಗ್ರಾಮ / ಪಟ್ಟಣ /ನಗರದ ನಿವಾಸಿಯಾದ ಶ್ರೀ / ಶ್ರೀಮತಿ________________ ಇವರ ಮಗ / ಮಗಳು / ಪತಿ /ಪತ್ನಿಯಾದ ಶ್ರೀ / ಶ್ರೀಮತಿ _________________ಇವರು ಹಿಂದುಳಿದ ವರ್ಗಗಳ (ಪ್ರವರ್ಗ) _______________ ಜಾತಿಯ _____________________ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :

ತಹಸೀಲ್ದಾರರು

ದಿನಾಂಕ: _________ ತಾಲ್ಲೂಕು

ಕಚೇರಿಯ ಮೊಹರು.

**(ಪ್ರವರ್ಗ–2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂ ನೆ – ಎಫ್**

**(ನಿಯಮ 3ಎ (2) (3) ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ(2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

____________________ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ____________________ ಇವರ ಮಗ/ಮಗಳು/ಪತಿ/ಪತ್ನಿಯಾದ, ಶ್ರೀ / ಶ್ರೀಮತಿ / ಕುಮಾರಿ________________________ಇವರು ತಾಯಿ/ಪೋಷಕರು/ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ: ಹಿಂವಕ 148 ಬಿಸಿಎ 2015 ದಿನಾಂಕ: 04–06–2015 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು:

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪ್ರತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು:

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನದ ಹುದ್ದೆಯನ್ನು ಹೊಂದಿರುವುದಿಲ್ಲವೆಂದು.

ಅಥವಾ

ಖಾಸಗಿ ನಿಯೋಜಕರ ಕೈ ಕೆಳಗೆ 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ ( ವೇತನ ಶ್ರೇಣಿ ರೂ.22,800 – 43,200 ಪ್ರಾರಂಭಿಕ ಹಂತ) ಕಡಿಮೆಯಿಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಅರ್ಜಿದಾರರು ಮತ್ತು ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯ ವಾರ್ಷಿಕ ಆದಾಯವು ರೂ. 6.00 ಲಕ್ಷಗಳಿಗಿಂತ ಮೀರಿರಬಾರದು.

ಅಥವಾ

ಆತನ / ಆಕೆಯ ತಂದೆ–ತಾಯಿ/ಪೋಷಕರು / ಪತ್ನಿ / ಪತಿಯು ಭೂ ಸುಧಾರಣಾ ಕಾಯ್ದೆ 1961 ರ ಅಡಿಯಲ್ಲಿ ನಿಗದಿಪಡಿಸಿದ 10 ಯೂನಿಟ್ ಕೃಷಿ ಭೂಮಿಗಿಂತ ಹೆಚ್ಚು ಕೃಷಿ ಭೂಮಿ ಅಥವಾ ಪ್ಲಾಂಟೇಷನ್ ಬೆಳೆ ಬೆಳೆಯುವ ಭೂಮಿಗೆ ಸಂಬಂಧಿಸಿದಂತೆ 20 ಎಕರೆಗಿಂತ ಹೆಚ್ಚು ಭೂಮಿ ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಿದೆ.

ಶ್ರೀ / ಶ್ರೀಮತಿ / ಕುಮಾರಿ ____________ ಇವರು _____________ ವರ್ಗಗಳ ________ ಪ್ರವರ್ಗದಲ್ಲಿ ಬರುವ ___________ಜಾತಿಗೆ ಸೇರಿರುತ್ತಾರೆಂದು ಮತ್ತು ಈ ಕುಟುಂಬದ ವಾರ್ಷಿಕ ಆದಾಯ ರೂ.________/– ಎಂದು ಪ್ರಮಾಣಿಕರಿಸಲಾಗಿದೆ.

ಈ ದೃಢೀಕರಣ ಪತ್ರವು ಐದು ವರ್ಷದ ಅವಧಿಗೆ ಚಾಲ್ತಿಯಲ್ಲಿರುತ್ತದೆ.

ಸ್ಥಳ :<br>ದಿನಾಂಕ:

ತಹಸೀಲ್ದಾರರು<br>__________ ತಾಲ್ಲೂಕು<br>ಕಚೇರಿಯ ಮೊಹರು.

---

ಸೂಚನೆ:

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿನಾಂಕ:04–06–2015 ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ–ತಾಯಿ, ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ. 4.50 ಲಕ್ಷಗಳಿಂದ ರೂ. 6.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ, ಮೀಸಲಾತಿ ಪ್ರಮಾಣಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ: 04–06–2015 ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.
2. ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ಮೀಸಲಾತಿ ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.

# <u>ನಮೂನೆ–1</u>

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ,

ತಹಸೀಲ್ದಾರರು

__________ ತಾಲ್ಲೂಕು

__________ ಜಿಲ್ಲೆ.

ಮಾನ್ಯರೇ,

ಶ್ರೀ / ಶ್ರೀಮತಿ ______________ ಎಂಬುವವರ ಮಗ / ಮಗಳು / ಪತಿ /ಪತ್ನಿ __________ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :

1. ಅಭ್ಯರ್ಥಿಯ ತಂದೆ/ತಾಯಿ/ ಪೋಷಕರ ಪತಿಯ /
   ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ /ಅರೆ ಸರ್ಕಾರಿ /ಸಾರ್ವಜನಿಕ ಉದ್ಯಮ /ಖಾಸಗಿ)
2. ಅಭ್ಯರ್ಥಿಯ ಪ್ರಸ್ತುತ ವಿಳಾಸ
   (ಸ್ಪಷ್ಟವಾಗಿ ನಮೂದಿಸುವುದು
3. ಅಭ್ಯರ್ಥಿಯ ಪ್ರಸ್ತುತ ವಿಳಾಸ
4. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
5. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/
   ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ
   ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

i) ವೇತನ ಶ್ರೇಣಿ

ii) ಜಮೀನಿನ ವಿವರ

iii) ಇತರ ಮೂಲಗಳು

6. ಆದಾಯ ತೆರಿಗೆ ಪಾವತಿದಾರರೇ?
7. ಸಂಪತ್ತು ತೆರಿಗೆ ಪಾವತಿದಾರರೇ?
8. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ,

ದಿನಾಂಕ :

(ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ತಂದೆ/ತಾಯಿ/ಪೋಷಕರ ಸಹಿ.
(ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು :**

ಅಭ್ಯರ್ಥಿಯು ಮತ್ತು ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ: 1)

2)

(ಪೂರ್ಣ ವಿಳಾಸದೊಂದಿಗೆ)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ /ಶ್ರೀಮತಿ ____________________ ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ / ಕುಮಾರಿ __________

ಎಂಬುವವರು ಕರ್ನಾಟಕ ರಾಜ್ಯದ ________________ ಜಿಲ್ಲೆಯ ವಿಭಾಗ _____________ ಗ್ರಾಮ / ಪಟ್ಟಣ / ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆಂದು ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

1. ಶ್ರೀ / ಶ್ರೀಮತಿ / ಕುಮಾರಿ ____________ ಇವರ ತಂದೆ / ತಾಯಿ / ಪೋಷಕರು ಸರ್ಕಾರಿ ಆದೇಶ ಸಂಖ್ಯೆ:ಎಸ್ ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31–01–1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ:

ತಹಶೀಲ್ದಾರರು
__________ ತಾಲ್ಲೂಕು
ಕಛೇರಿಯ ಮೊಹರು.

ಸೂಚನೆ–1: ಇದರಲ್ಲಿ ಉಪಯೋಗಿಸಲಾದ ‘ ಸಾಮಾನ್ಯ ನಿವಾಸಿ” ಎಂಬ ಪದವು 1950 ರ ಜನತಾ ಪ್ರಾತಿನಿಧ್ಯ ಕಾಯಿದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ 2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31–01–1995 ರನ್ವಯ ಮೇಲುಸ್ತರ (Creamy Layer) ದರವನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 96 ಸೇನನಿ 2003, ದಿನಾಂಕ 10–08–2005**

**ನಮೂನೆ–2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ______________________________ರವರ ಮಗ / ಮಗಳು / ಪತಿ / ಪತ್ನಿ ಶ್ರೀ/ ಶ್ರೀಮತಿ/ಕುಮಾರಿ____________ ಜಿಲ್ಲೆ ____________ ತಾಲ್ಲೂಕು ____________ ಗ್ರಾಮದಲ್ಲಿ ____________ ವಾಸವಾಗಿರುವ ಇವರು ಒಂದನೇ ತರಗತಿಯಿಂದ ____________ ತರಗತಿಯವರೆಗೆ ____________ ಜಿಲ್ಲೆ ______________ ತಾಲ್ಲೂಕು ______________ ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ____________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

(ಸಹಿ)
ಮುಖ್ಯೋಪಾಧ್ಯಾಯರು,

ಮೇಲುರುಜು
ಕ್ಷೇತ್ರ ಶಿಕ್ಷಣ ಅಧಿಕಾರಿ

---

**ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೆನೆನಿ 2001 ದಿನಾಂಕ: 27–07–2001**

**ನಮೂನೆ–3**

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ**

**ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ________________ ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ ಶ್ರೀಮತಿ/ಕುಮಾರಿ______________ ಜಿಲ್ಲೆ ____________ ತಾಲ್ಲೂಕು ____________ ಗ್ರಾಮದಲ್ಲಿ _____________ ವಾಸವಾಗಿರುವ ಇವರು : ಇವರ ಕುಟುಂಬದವರು ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು ____________ ಯೋಜನೆಗಾಗಿ ____________ ಇಸವಿ ____________ ಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ:–

i) ** ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು;

ii) ** ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ ; ಯೋಜನೆಯಿಂದ ತಾವು ವಾಸಿಸುವ ಮನೆ;

iii) ** ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ;

iv) ** ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ತಹಸೀಲ್ದಾರ್

ತಾಲ್ಲೂಕು.

(** ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.)

# <u>ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ</u>

ಶ್ರೀ / ಶ್ರೀಮತಿ ________________ ರವರ ಮಗ/ಮಗಳು/ಪತ್ನಿ ಶ್ರೀ/ ಶ್ರೀಮತಿ/ಕುಮಾರಿ_____________ ಜಿಲ್ಲೆ _____________ ತಾಲ್ಲೂಕು ____________ ಗ್ರಾಮದಲ್ಲಿ _____________ ವಾಸವಾಗಿರುವ ತರಗತಿಯಿಂದ _____________ ತರಗತಿಯವರೆಗೆ _____________ ಶೈಕ್ಷಣಿಕ ವರ್ಷದಿಂದ ________________ ಶೈಕ್ಷಣಿಕ ವರ್ಷದವರೆಗೆ _________________ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ದಿನಾಂಕ : _____________ ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು.

ಸ್ಥಳ : _____________

**<u>ಸೂಚನೆ</u> :–** ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಶಾಲೆಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಶಾಲಾವಾರು ಪ್ರತ್ಯೇಕ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ ಸಲ್ಲಿಸಬೇಕು.

**ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ /ಸ್ಥಳೀಯ ಪ್ರಾಧಿಕಾರ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ______________________ ರವರು ರಾಜ್ಯ / ಕೇಂದ್ರ ಸರ್ಕಾರ / ಸ್ಥಳೀಯ ಪ್ರಾಧಿಕಾರದಲ್ಲಿ _______________ (ಪದನಾಮ) __________________________________ ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ ____________________ ರಿಂದ __________________________ ರವರೆಗೆ ಹೊಂದಿರುವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ : ____________ ನೇಮಕಾತಿ ಪ್ರಾಧಿಕಾರದ ಸಹಿ/–
ದಿನಾಂಕ : ____________ ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ

**CERTIFICATE TO BE FURNISHED BY THE STATE/CENTRAL GOVT./ Local Authority SERVANTS**

Certified that Sri / Smt ____________________________________ holds a permanent / temporary post under the State/Central Govt./Local Authority as ______________________________(Designation) in the dept of ______________________ from ___________________________ having been appointed there-in under the rules of recruitment . He / She is permitted to apply for the said post.

Place: Signature of appointing authority
Date: of the department / with name and seal.

## CERTIFICATE FOR THE PERSONS WITH DISABILITIES

This is to certify that Sri/Smt/Kum --------------------------------------------------------------------- Son/wife/Daughter of Shri -------------------------------------Age ---------------------------old, male/female, Registration No-----------------------------------------------is a case of ------------------ ---------------------------------------------------------He/She is physically disabled/visual disabled /speech & hearing disabled and has ------------------------------%------------------------------------ percent ) permanent physical impairment /visual impairment speech & hearing impairment) in relation to his/her---------------------------------------------

Note:-

1. This condition is progressive / non progressive likely to improve / not likely to improve.
2. Re-assessment is not recommended / is recommended after a period of ----------------------months / years.
    - Strike out which is not applicable

| | | | |
|---|---|---|---|
| Recent Photograph showing Disability affixed here) | Sd/- Doctor (Seal) | Sd/- Doctor (Seal) | Sd/- Doctor (Seal) |

Countersigned by the
Medical Superintendent CMO/ Head of
Hospital (with seal)

Signature /Thumb impression
of the disabled person

Explanation :-

1) Blindness refers to a condition where a person suffers from any of the following conditions namely:- (a) Total absence of sight; of (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;

2)Person with Low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device;

3)"Hearing impairment" mean's loss of sixty decibels or more in the better ear in the conversational range of frequencies.

4)"Locomotor disability" means disability of the bones, joints or muscles leading to substantial restriction of the movement of the limbs or any form of cerebral palsy.

**ಅನುಬಂಧ–ಎ**
**ಅರ್ಹತಾ ಪ್ರಮಾಣ ಪತ್ರ**
**ಅನುಚ್ಛೇದ 371(ಜೆ) ಮೇರೆಗೆ)**
**(3)(3) ನೇ ನಿಯಮ ನೋಡಿ)**

**ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)**

ಶ್ರೀ/ಶ್ರೀಮತಿ________________________ರವರು ____________________

ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ____________ಜಿಲ್ಲೆಯ __________ತಾಲ್ಲೂಕಿನ

______________________ಗ್ರಾಮ/ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ:__________ ಹೆಸರು__________

ದಿನಾಂಕ:__________ ಅಸಿಸ್ಟೆಂಟ್ ಕಮೀಷನರ್

__________ಉಪ ವಿಭಾಗ

__________ಜಿಲ್ಲೆ.

**ಅನುಬಂಧ–ಡಿ**
**ಸ್ವಗ್ರಾಮ ಪ್ರಮಾಣ ಪತ್ರ**
**ಅನುಚ್ಛೇದ 371(ಜೆ) ಮೇರೆಗೆ)**
**4 (ಇ) ನಿಯಮ ನೋಡಿ)**

**ಪ್ರಮಾಣ ಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)**

ಶ್ರೀ/ಶ್ರೀಮತಿ________________________ರವರು ____________________

ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ____________ಜಿಲ್ಲೆಯ __________ತಾಲ್ಲೂಕಿನ

______________________ಗ್ರಾಮ/ಪಟ್ಟಣವನ್ನು ತನ್ನ ಸ್ವಗ್ರಾಮ / ಸ್ಥಳ ಎಂದು ತನ್ನ ಸೇವಾ ಪುಸ್ತಕದಲ್ಲಿ ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶಿಲಿಸಿದ್ದೇನೆ ಮತ್ತು ಮೇಲಿನ ನಮೂದು 01–01–2013ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ನಮೂದು ಮಾಡಲಾಗಿತ್ತೆಂದು ಸ್ವತಃ ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ:__________ ಹೆಸರು__________

ದಿನಾಂಕ:__________ ಪದನಾಮ __________

ಕಛೇರಿ __________

ಇಲಾಖೆ __________